# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್–102,
3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು–79.

**ಸಂಖ್ಯೆ: ವಾ–102/ವಾ.ಸ./ಸಭಾನಡವಳಿ–43/2022–23** **ದಿನಾಂಕ: 16/07/2022**

**–:ಸಭೆಯ ನಡವಳಿಗಳು:–**

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 16/07/2022 ಶನಿವಾರದಂದು ಬೆಳಗ್ಗೆ 10.00 ಘಂಟೆಗೆ ವಾರ್ಡ್–102 ವೃಷಭಾವತಿನಗರ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್–19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**<u>ಸಭೆಗೆ ಹಾಜರಿದ್ದವರು:</u>**

| | |
|---|---|
| 1 | ಶ್ರೀ. ಕೆ. ವಿಜಯ್ ಶೇಖರ್<br>ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್–102 |
| 2 | ಶ್ರೀ ಜಿ. ಪ್ರಕಾಶ್, ಕಾರ್ಯದರ್ಶಿ ಮತ್ತು ಸಂಚಾಲಕರು, ವಾರ್ಡ್ ಸಮಿತಿ ವಾ–102 ಹಾಗೂ<br>ಸಹಾಯಕ ಅಭಿಯಂತರರು, ವಾರ್ಡ್–102. |
| 3 | ಶ್ರೀ ಜಿ.ಆರ್.ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102. |
| 4 | ಶ್ರೀ ಲೋಕೇಶ ಕೆ.ವಿ., ಹಿರಿಯ ವೆಟರಿನರಿ ಪರಿವೀಕ್ಷಕರು. |
| 5 | ಶ್ರೀ ಶಿವಕುಮಾರ್, ಸಹಾಯಕ ಅಭಿಯಂತರರು, ಎನ್‌ಡಬ್ಲ್ಯೂ–2, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 6 | ಶ್ರೀ ಕುನಾಲ್ ಕುಮಾರ್, ಸಹಾಯಕ ಅಭಿಯಂತರರು, ಎನ್–6, ಬೆಸ್ಕಾಂ. |
| 7 | ಶ್ರೀಮತಿ ಸುಮನ, ಕಿರಿಯ ಅಭಿಯಂತರರು, ಎನ್–6, ಬೆಸ್ಕಾಂ. |
| 8 | ಶ್ರೀ ಹರೀಶ ಎಮ್. ಟ್ಯಾಕ್ಸ್ ಇನ್ಸ್‌ಪೆಕ್ಟರ್, ವಾರ್ಡ್–102. |
| 9 | ಶ್ರೀ ಎಸ್.ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, (ಗುತ್ತಿಗೆ) ವಾರ್ಡ್–102. |
| 10 | ಶ್ರೀ ರಾಜೇಶ್, ವಾರ್ಡ್ ಮಾರ್ಷಲ್, ವಾರ್ಡ್ –102. |
| 11 | ಶ್ರೀ ದಯಾನಂದ್, ಆಟೋ ಸೂಪರ್‌ವೈಸರ್, ವಾರ್ಡ್–102. |
| 12 | ಶ್ರೀಮತಿ ವಿದ್ಯಾರಾಣಿ, ಆಶಾಕಾರ್ಯಕರ್ತೆ, ವಾರ್ಡ್–102. |
| 13 | ಶ್ರೀಮತಿ ಬೈಲಮ್ಮ, ಆಶಾಕಾರ್ಯಕರ್ತೆ, ವಾರ್ಡ್–102. |
| 14 | ಶ್ರೀ ದೇವರಾಜು, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 15 | ಶ್ರೀ ರಾಜ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 16 | ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 17 | ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 18 | ಶ್ರೀಮತಿ ಸಿದ್ದಗಂಗಮ್ಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 19 | ಶ್ರೀ ರಂಗನಾಥ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |

ಮು.ತಿ.ನೋ.

Scanned with Oken Scanner

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-102 ವೃಷಭಾವತಿನಗರದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ➢ ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕಳೆದ 15 ದಿನಗಳಿಂದ ಯಾವುದೇ ಕೋವಿಡ್-19 ಸೋಂಕಿತರು ಪತ್ತೆಯಾಗಿರುವುದಿಲ್ಲ ಎಂದು ತಿಳಿಸುತ್ತಾ, 18 ವರ್ಷ ಮೇಲ್ಪಟ್ಟ ಎಲ್ಲಾ ಸಾರ್ವಜನಿಕರಿಗೆ ಉಚಿತವಾಗಿ ಬೂಸ್ಟರ್ ಡೋಸ ಅನ್ನು ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಪ್ರತಿನಿತ್ಯ ಶಾಲೆಗಳಿಗೆ ಭೇಟಿ ನೀಡಿ, ಲಸಿಕೆ ಪಡೆಯ ಶಾಲೆ ಮಕ್ಕಳ ಪಟ್ಟಿಯನ್ನು ತಯಾರಿಸಿ, ಬೂಸ್ಟರ ಡೋಸ್ ಅನ್ನು ನೀಡಲು ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

2) **ಅಭಿಯಂತರರ ವಿಭಾಗದ ಬಗ್ಗೆ:-**

- ➢ ಶ್ರೀ ದೇವರಾಜ್, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, ಉದ್ಯಾನವನದ ಬಳಿಯಲ್ಲಿ ಗಾಡಿಗಳನ್ನು ಪಾರ್ಕಿಂಗ್ ಮಾಡುತ್ತಾರೆಂದು ಸಭೆಯಲ್ಲಿ ದೂರುತ್ತಾ, Parking only or two wheelers ಎಂದು ಬೋರ್ಡ್ ಅಳವಡಿಸಿಕೊಡಲು ಕೋರಿದರು.
- ➢ ಸಹಾಯಕ ಅಭಿಯಂತರರು, ರವರು ಮಾತನಾಡುತ್ತಾ, ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿ ಸಿಸಿ ಕ್ಯಾಮೆರಾ ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಸದರಿ ಸ್ಥಳದಲ್ಲಿ ಹಾಗೂ ಅವಶ್ಯವಿರುವ ಸ್ಥಳಗಳನ್ನು ಪರಿಶೀಲಿಸಿ ಅಳವಡಿಸಲು ಕ್ರಮವಹಿಸಲಾಗುವುದು ಎಂದು ಸಭೆಗೆ ತಿಳಿಸಿದರು.

3) **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ➢ ಮಾನ್ಯ ನೋಡಲ್ ಅಧಿಕಾರಿಯವರ ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾಗಿ ಕಸ ಸಂಗ್ರಹಣೆ ಮಾಡುತ್ತಿರುವ ಬಗ್ಗೆ ವಿವರಿಸುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸಭೆಯಲ್ಲಿ ತಿಳಿಸಿದರು.
- ➢ ಶ್ರೀ ಎಸ್.ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಮನೆಗಳಿಂದ ನೇರವಾಗಿ ಕಸವನ್ನು ಸಂಗ್ರಹಿಸುತ್ತಿದ್ದು, ಆಟೋ, ಟಿಪ್ಪರ್‌ಗಳು ದಿನನಿತ್ಯ ಕೆಲಸವನ್ನು ಉತ್ತಮವಾಗಿ ನಿರ್ವಹಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ➢ ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, ಮಾರುತಿ ಶಾಲೆಯ ಕಾಂಪೌಂಡ್ ವಾಲ್ ಹತ್ತಿರ ಕಸ ಬಿಸಾಡುತ್ತಿದ್ದಾರೆಂದು ಸಭೆಯಲ್ಲಿ ದೂರಿದರು.
- ➢ ಮಾನ್ಯ ನೋಡಲ್ ಅಧಿಕಾರಿಯವರ ಮಾತನಾಡುತ್ತಾ, ರಾತ್ರಿ ವೇಳೆಯಲ್ಲಿ ಕಸ ಬಿಸಾಡುವ ಸ್ಥಳಗಳಲ್ಲಿ ಮಾರ್ಷಲ್‌ಗಳು ಗಸ್ತು ತಿರುಗಿ ದಂಡ ವಿಧಿಸಲು ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

4) **ಪಶುಪಾಲನೆ ವಿಭಾಗದ ಬಗ್ಗೆ:-**

- ➢ ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಮಾರುತಿನಗರದ 3ನೇ ಅಡ್ಡರಸ್ತೆ ನಾಯಿಗಳಿಗೆ ವ್ಯಾಕ್ಸಿನೇಷನ ಮಾಡಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
- ➢ ಮಾನ್ಯ ನೋಡಲ್ ಅಧಿಕಾರಿಯವರ ಮಾತನಾಡುತ್ತಾ, ನಾಯಿಗಳಿಗೆ ವ್ಯಾಲ್ಸಿನೇಷನ್ ಹಾಕಲು ಕ್ರಮವಹಿಸುವಂತೆ ಹಿರಿಯ ವೆಟರಿನರಿ ಪರಿವೀಕ್ಷಕರಿಗೆ ತಿಳಿಸಲು ಕಾರ್ಯದರ್ಶಿಗಳಿಗೆ ಸಭೆಯಲ್ಲಿ ಹೇಳಿದರು.

ಪು.ತಿ.ನೋ.

Scanned with Oken Scanner

5) <u>ಕಂದಾಯ ವಿಭಾಗದ ಬಗ್ಗೆ:-</u>

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡಿ, ದಿನಾಂಕ: 19.05.2022 ರಂದು ವಾರ್ಡ್-75ರಲ್ಲಿ ಮಳೆ ಹಾನಿಗೊಳಗಾದ ಪ್ರದೇಶಗಳಲ್ಲಿನ ನಿವಾಸಿಗಳ ಮನೆಗಳಿಗೆ ಮತ್ತು ಅಂಗಡಿಗಳಿಗೆ ನೀರು ತುಂಬಿಕೊಂಡು ವಿವಿಧ ವಸ್ತುಗಳು, ದಿನಸಿ ಸಾಮಾಗ್ರಿಗಳು ಮಳೆ ನೀರಿನಲ್ಲಿ ನೆನೆದು ಹಾನಿಯಾಗಿರುವ ನಿವಾಸಿಗಳಿಗೆ ಪಾಲಿಕೆ ವತಿಯಿಂದ ಪರಿಹಾರ ನೀಡಿರುವ ಬಗ್ಗೆ ಮಾಹಿತಿಯನ್ನು ಸಭೆಗೆ ತಿಳಿಸಲು ಕಂದಾಯ ವಿಭಾಗದ ಅಧಿಕಾರಿಗಳಿಗೆ ತಿಳಿಸಿದರು.
- ಶ್ರೀ ವೆಂಕಟರಮಣ, ಕಂದಾಯ ಪರಿವೀಕ್ಷಕರು, ವಾರ್ಡ್ -102 ರವರು ಮಾತನಾಡುತ್ತಾ, ಈಗಾಗಲೇ ಹಾನಿಗೊಳಗಾದ ನಿವಾಸಿಗಳ ಪಟ್ಟಿಯನ್ನು ತಯಾರಿಸಿ ಅನುಮೋದನೆ ಪಡೆಯಲಾಗಿದ್ದು, ಇದರಲ್ಲಿ ಎಲ್ಲಾ ಫಲಾನುಭವಿಗಳಿಗೆ ಅನುದಾನ ಬಿಡುಗಡೆಯಾಗಿದ್ದು, ಇನ್ನು ಕೇವಲ 6 ಫಲಾನುಭವಿಗಳು ಸರಿಯಾದ ದಾಖಲಾತಿಗಳನ್ನು ನೀಡದ ಕಾರಣ ಇನ್ನು ಅನುದಾನ ಬಿಡುಗಡೆಯಾಗಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.

6) <u>ಬಿಡಬ್ಲ್ಯೂಎಸ್‌ಎಸ್‌ಬಿ ವಿಭಾಗದ ಬಗ್ಗೆ:-</u>

- ಶ್ರೀ ದೇವರಾಜ್, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, ಬೋರ್‌ವೆಲ್‌ಗಳಿಗೆ ಪ್ಯಾನೆಲ್ ಬೋರ್ಡ್ ಅಳವಡಿಸಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
- ಶ್ರೀ ಹೇಮಂತ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, ಎನ್.ಜಿ.ಓ.'ಸ್ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು ಹಾಗೂ ಕಳೆದ ಸಭೆಗಳಲ್ಲಿ ಚರ್ಚಿಸಿದಂತೆ ಗೇಟ್‌ವಾಲ್ವ್‌ಗಳನ್ನು ಇನ್ನೂ ಸರಿಪಡಿಸಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ಶ್ರೀ ಶಿವಕುಮಾರ್, ಸಹಾಯಕ ಅಭಿಯಂತರರು, ಎನ್‌ಡಬ್ಲ್ಯೂ-2, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಶೀಘ್ರವಾಗಿ ಸೂಕ್ತ ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

7) <u>ಬೆಸ್ಕಾಂ ವಿಭಾಗದ ಬಗ್ಗೆ:-</u>

- ಶ್ರೀ ಹೇಮಂತ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, 5ನೇ ಮುಖ್ಯರಸ್ತೆಯ ಹತ್ತಿರ ವಿದ್ಯುತ್ ಕಂಬಗಳಿಗೆ ಅಡ್ಡವಾಗಿರುವ ಮರದ ರೆಂಬೆಗಳನ್ನು ಕತ್ತರಿಸಬೇಕಾಗಿ ಸಭೆಯಲ್ಲಿ ಕೋರಿದರು.
- ಸಹಾಯಕ ಅಭಿಯಂತರರು (ಕಾರ್ಯದರ್ಶಿ) ವಾರ್ಡ್-102 ರವರು ಮಾತನಾಡುತ್ತಾ, ವಾರ್ಡ್ ಪರಿವೀಕ್ಷಣೆಯ ವೇಳೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ವತಿಯಿಂದ ರಸ್ತೆಗಳನ್ನು ಕತ್ತರಿಸಿ ಸರಿಪಡಿಸದೇ ಹಾಗೇ ಬಿಟ್ಟಿರುತ್ತಾರೆ. ಇದನ್ನು ಗುರುತಿಸಿ ಶೀಘ್ರವಾಗಿ ಸರಿಪಡಿಸುವುದು ಹಾಗೂ ಸಮೃದ್ಧಿ ಹೋಟೆಲ್ ಹತ್ತಿರ 11 ಕೆ.ವಿ. ಕೇಬಲ್‌ಗಳನ್ನು ಭೂಗತವಾಗಿ ಅಳವಡಿದೇ ರಸ್ತೆ ಮೇಲ್ಭಾಗದಲ್ಲಿ ಅಳವಡಿಸಿರುತ್ತಾರೆ ಎಂದು ಸಭೆಯಲ್ಲಿ ತಿಳಿಸಿದರು.
- ಶ್ರೀ ಕುನಾಲ್ ಕುಮಾರ್, ಸಹಾಯಕ ಅಭಿಯಂತರರು, ಎನ್-6, ಬೆಸ್ಕಾಂ ರವರು ಮಾತನಾಡುತ್ತಾ, ಸದರಿ ದೂರಗಳನ್ವಯ ಸ್ಥಳ ಪರಿಶೀಲಿಸಿ ಶೀಘ್ರವಾಗಿ ಸೂಕ್ತ ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-102 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

| | |
|---|---|
| **ಕಾರ್ಯದರ್ಶಿ** | **ನೋಡಲ್ ಅಧಿಕಾರಿಗಳು** |
| ಹಾಗೂ ಸಹಾಯಕ ಅಭಿಯಂತರರು, | ವಾರ್ಡ್ ಸಮಿತಿ, ವಾರ್ಡ್-102 |
| ವಾರ್ಡ್ ಸಂಖ್ಯೆ-102 | |

ಪು.ತಿ.ನೋ.

Scanned with Oken Scanner

<u>ಪ್ರತಿಯನ್ನು</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned with Oken Scanner